



ಅರುಣ ಪಿ. ಭಟ್ಟ




ಸಂಬಂಧಿಕರ ಭೇಟಿಗೆ ನಿಶ್ಚಯ ಮಾಡುವ ಸಾಧ್ಯತೆ ಇದೆ. ಉದ್ಯೋಗಸ್ಥರಿಗೆ ತಾತ್ಕಾಲಿಕ ವರ್ಗಾವಣೆ ಆಗಬಹುದು. ಕೌಟುಂಬಿಕ ಜೀವನ ಸಂತೋಷವಾಗಿರುತ್ತದೆ. ಮಕ್ಕಳಿಗೆ ಕೆಲವು ಜವಾಬ್ದಾರಿಗಳನ್ನು ವಹಿಸುತ್ತೀರಿ. ವ್ಯಾಪಾರ ವ್ಯವಹಾರ ಮಾಡುತ್ತಿರುವವರಿಗೆ ಪ್ರಗತಿ ಇದೆ. ವಾರದ ಕೊನೆ ಮೂರು ದಿನಗಳು ಕೋರ್ಟ್ ಕಟಕಟೆ ವ್ಯಾಜ್ಯಗಳಿಗೆ ಅಲೆದಾಡಬೇಕಾಗುತ್ತದೆ. ಶುಭದಿನ 30. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಈ ವಾರದ ಶುರುವಿನಲ್ಲೇ ಆದಾಯ ಹೆಚ್ಚಿಸಿಕೊಳ್ಳುವಲ್ಲಿ ಯಶಸ್ವಿಯಾಗುತ್ತೀರಿ. ಜತೆಗೆ ಖರ್ಚನ್ನು ಕೂಡ ಕಡಿಮೆ ಮಾಡಿಕೊಳ್ಳುವಲ್ಲಿ ಕೂಡ. ಉದ್ಯಮಿಗಳು, ಉದ್ಯೋಗಸ್ಥರು ಹಿಂದೆಂದಿಗಿಂತ ಹೆಚ್ಚು ಚಟುವಟಿಕೆಯಿಂದ ಕೆಲಸ ಮಾಡುತ್ತೀರಿ. ವರ್ಚಸ್ಸು, ಸ್ಥಾನಮಾನ ಕೂಡ ಇದೇ ಅವಧಿಯಲ್ಲಿ ಹೆಚ್ಚಾಗಲಿದೆ. ಪ್ರೀತಿಪಾತ್ರರಿಗೆ ಉಡುಗೊರೆಗಳನ್ನು ನೀಡುವ ಸಾಧ್ಯತೆ ಇದೆ. ಶುಭದಿನ 29. ಹನುಮಾನ್ ಚಾಲೀಸ್ ಪಠಿಸಿರಿ.




ಉದ್ಯಮಿಗಳಿಗೆ ಅತ್ಯುತ್ತಮ ಸಮಯ. ಆರೋಗ್ಯ ಕೂಡ ಉತ್ತಮವಾಗಿರುತ್ತದೆ. ಇದರಿಂದ ನಿಮಗೆ ಸಮಾಧಾನ ಸಂತೋಷ ಉಂಟಾಗುತ್ತದೆ. ನೀವು ಅಂದುಕೊಂಡ ಹಲವು ಕೆಲಸಗಳು ಪೂರ್ಣಗೊಳ್ಳುತ್ತವೆ. ಉದ್ಯೋಗಸ್ಥರಿಗೆ ಮಾಡುವ ಕೆಲಸದಲ್ಲಿ ಗುಣಮಟ್ಟದ ವೇಗ ಕಂಡುಕೊಳ್ಳಲು ಸಹಕಾರಿ ಆಗುತ್ತದೆ. ಸಾಮಾಜಿಕ ಸ್ಥಾನಮಾನವು ಹೆಚ್ಚಾಗಲಿದೆ. ಶುಭದಿನ 31. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ವಿದ್ಯಾರ್ಥಿಗಳಿಗೆ ಸಾಧನೆಗೆ ಅತ್ಯುತ್ತಮವಾದ ಅವಧಿ ಇದು. ತಂತ್ರಜ್ಞಾನ, ಸಾಹಿತ್ಯ ಹಾಗೂ ಸಿನಿಮಾ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಹಲವು ಅವಕಾಶಗಳು ಒಟ್ಟೊಟ್ಟಿಗೆ ಬರಲಿವೆ. ಜತೆಗೆ ಬಡ್ತಿ ಸಿಗುವ ಸಾಧ್ಯತೆಯೂ ಇದೆ. ಆರೋಗ್ಯ ಬಗ್ಗೆ ನಿರ್ಲಕ್ಷ್ಯ ಮಾಡದೇ ಕಡ್ಡಾಯವಾಗಿ ವೈದ್ಯರಿಂದ ಚಿಕಿತ್ಸೆ ಪಡೆದುಕೊಳ್ಳಿ. ಸ್ವಯಂ ವೈದ್ಯ ಯಾವ ಕಾರಣಕ್ಕೂ ಬೇಡ. ಶುಭದಿನ 30. ಶಿವಕವಚ ಪಠಣ ಮಾಡಿರಿ.




ವಾರದ ಶುರುವಿನಿಂದಲೇ ಕೆಲಸಗಳನ್ನು ಪೂರೈಸಲು ಬಹಳ ಶ್ರಮ ಹಾಕುತ್ತೀರಿ. ಹಣ ಹೂಡಿಕೆ ವ್ಯವಹಾರದಲ್ಲಿ ನಿಮ್ಮ ಸ್ಥಾನಮಾನಕ್ಕೆ ಧಕ್ಕೆ ಆಗುವ ಸಾಧ್ಯತೆ ಇದೆ. ಯಾರನ್ನೂ ಸುಮ್ಮನೆ ನಂಬುವುದು ಒಳ್ಳೆಯದಲ್ಲ. ವಂಚಕರ ಬಗ್ಗೆ ಎಚ್ಚರಿಕೆಯಿಂದ ಇರಬೇಕು. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಕೈಕೊಡುವ ಸಾಧ್ಯತೆ ಇದೆ. ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಸಾಧ್ಯತೆ ಇದೆ. ಶುಭದಿನ 29. ಲಿಂಗಾಷ್ಟಕ ಪಠಿಸಿರಿ.




ವಾರದ ಆರಂಭದಿಂದಲೇ ವ್ಯವಹಾರ ವ್ಯಾಪಾರದಲ್ಲಿ ನಿಮಗೆ ಇರುವ ಕನಸನ್ನು ಈಡೇರಿಸಿಕೊಳ್ಳಲು ಶ್ರಮ ಹಾಕುತ್ತೀರಿ. ಇದರಿಂದ ಮುಂಬರುವ ದಿನಗಳಲ್ಲಿ ನಿಮಗೇ ಅನುಕೂಲ ಆಗಲಿದೆ. ಭೂಮಿ ಖರೀದಿ ವ್ಯವಹಾರಕ್ಕೆ ಸಂಬಂಧಿಸಿದಂತೆ ಹಲವು ಅವಕಾಶಗಳು ನಿಮಗೆ ದೊರೆಯುತ್ತವೆ. ಧಾರ್ಮಿಕ ಕೆಲಸ ಕಾರ್ಯಗಳಲ್ಲಿ ಹಿನ್ನಡೆ ಅನುಭವಿಸಬೇಕಾಗುತ್ತದೆ. ಶುಭದಿನ 29. ಚಂಡಿ ಪಾರಾಯಣ ಮಾಡಿರಿ.




ಕೌಟುಂಬಿಕ ವಿಚಾರದಲ್ಲಿ ವಾರದ ಶುರುವಿನಲ್ಲಿ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ಹಣಕಾಸಿಗೆ ಕೊರತೆ ಇರುವುದಿಲ್ಲ. ಉದ್ಯೋಗದಲ್ಲಿ ಆಲಸ್ಯ ನಿಮ್ಮನ್ನು ಕಾಡಬಹುದು. ನಿಮ್ಮ ದೈನಂದಿನ ವ್ಯವಹಾರಗಳಲ್ಲಿ ಏರಿಳಿತಗಳಾಗುತ್ತವೆ. ವಾರದ ಮಧ್ಯದಲ್ಲಿ ಮನೆಗೆ ಸಂಬಂಧಿಸಿದ ವಿಷಯಗಳು ಪ್ರಾಮುಖ್ಯ ಪಡೆಯುತ್ತವೆ. ಪೀಠೋಪಕರಣ ಖರೀದಿ ಮಾಡುವ ಸಂಭವವಿದೆ. ಶುಭದಿನ 28. ಸೌಂದರ್ಯ ಲಹರಿ ಪಠಿಸಿರಿ.




ಶೈಕ್ಷಣಿಕ ರಂಗದಲ್ಲಿ ಕಾರ್ಯ ನಿರ್ವಹಿಸುವವರಿಗೆ ವಾರದ ಆರಂಭದಲ್ಲಿ ಅದ್ಭುತವಾದ ಯಶಸ್ಸು ದೊರೆಯುವ ಅವಕಾಶಗಳಿವೆ. ಕ್ರೀಡೆ, ಸಿನಿಮಾ ಸಂಗೀತ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಗೌರವಯುತವಾದ ಸ್ಥಾನಮಾನ ದೊರೆಯಲಿದೆ. ಹಲವು ಘಟನೆಗಳು ನೀವು ಅಂದುಕೊಂಡ ದಿಕ್ಕಿನ ಕಡೆಗೆ ಸಾಗುವುದರಿಂದ ಬಹಳ ಸಂತೋಷಗೊಳ್ಳುವಿರಿ. ಶುಭದಿನ 28. ಶ್ರೀ ರಾಮರಕ್ಷಾ ಸ್ತೋತ್ರ ಪಠಿಸಿರಿ.




ವಾರದ ಆರಂಭದಲ್ಲೇ ಶುಭ ಸುದ್ದಿ ಕೇಳಲಿದ್ದೀರಿ. ಆರೋಗ್ಯವು ಉತ್ತಮವಾಗಿರಲಿದೆ. ಈ ಹಿಂದಿನ ದೈಹಿಕ ಸಮಸ್ಯೆಗಳು ನಿವಾರಣೆಯಾಗಲಿವೆ. ಆತ್ಮವಿಶ್ವಾಸ ವೃದ್ಧಿಯಾಗಲಿದೆ. ದೈನಂದಿನ ವ್ಯವಹಾರಗಳಲ್ಲಿ ಯಾವುದೇ ಬದಲಾವಣೆ ಮಾಡಿಕೊಳ್ಳದೆ ಮುಂದುವರಿಯಿರಿ. ಇನ್ನು ಹಣಕಾಸಿನ ಅನುಕೂಲ ಆಗಲಿದೆ. ವೈವಾಹಿಕ ಜೀವನ ಸಂತೋಷದಾಯಕವಾಗಿ ಇರುತ್ತದೆ. ಶುಭದಿನ 29. ಸುಬ್ರಹ್ಮಣ್ಯ ಜಪ ಗೋಪೂಜೆ ಮಾಡಿರಿ.




ಹಣಕಾಸು ಹೂಡಿಕೆ ಮಾಡಿದ್ದನ್ನು ಈಗ ಬಳಸಿಕೊಳ್ಳಲು ಮುಂದಾಗಲಿದ್ದೀರಿ. ಕೋರ್ಟ್ ವ್ಯವಹಾರಗಳು ನಿಮ್ಮ ಪರವಾಗಿ ಆಗುವ ಸಾಧ್ಯತೆ ಇದೆ. ಜೀವನದಲ್ಲಿ ಉನ್ನತ ಸ್ಥಾನವನ್ನು ತಲುಪುವ ನಿಟ್ಟಿನಲ್ಲಿ ಮುಖ್ಯವಾದ ತೀರ್ಮಾನ ಕೈಗೊಳ್ಳಲಿದ್ದೀರಿ. ಆದರೆ ಭವಿಷ್ಯದ ನಿಮ್ಮ ಗುರಿಯನ್ನು ನಿರ್ಧರಿಸುವ ಕಡೆಗೆ ಗಮನ ಕೇಂದ್ರೀಕರಿಸುತ್ತೀರಿ. ಶುಭದಿನ 30. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.




ಆರ್ಥಿಕ ಪ್ರಗತಿ ಸಾಧಿಸಲು ಉತ್ತಮ ಅವಕಾಶಗಳಿವೆ. ಸರಿಯಾದ ದಿಕ್ಕಿನಲ್ಲಿ ಪ್ರಯತ್ನ ಪಡಲು ಸೂಕ್ತ ಸಮಯ ಇದು. ಬೌದ್ಧಿಕ ಮತ್ತು ದೈಹಿಕ ಸಾಮರ್ಥ್ಯ ವೃದ್ಧಿ ಆಗಲಿದೆ. ಸ್ಪರ್ಧಾತ್ಮಕ ಕ್ಷೇತ್ರದಲ್ಲಿ ಅದೃಷ್ಟ ಪರೀಕ್ಷೆ ಮಾಡಬಹುದು. ಜತೆಗೆ ಪ್ರಾಮಾಣಿಕ ಪರಿಶ್ರಮವೂ ಹಾಕಿದರೆ ಯಶಸ್ಸು ದೊರೆಯುವ ಅವಕಾಶ ಹೆಚ್ಚಾಗಿದೆ. ಸಂತಾನ ಅಪೇಕ್ಷಿತರಿಗೆ ಶುಭ ಸುದ್ದಿ ಸಿಗಲಿದೆ. ಶುಭದಿನ 31. ಕನಕಧಾರಾ ಸ್ತೋತ್ರ ಪಠಿಸಿರಿ.




ಪರಿಶ್ರಮಕ್ಕೆ ತಕ್ಕಂತೆ ಫಲಿತಾಂಶ ನಿಮಗೆ ದೊರೆಯಲಿದೆ. ನಿಮ್ಮ ಕೆಲಸಕ್ಕೆ ಮೆಚ್ಚುಗೆ, ಮನ್ನಣೆ, ಪುರಸ್ಕಾರಗಳು ಲಭಿಸಲಿವೆ. ಕೌಟುಂಬಿಕ ಜೀವನ ಆರಾಮವಾಗಿ ಇರುತ್ತದೆ. ಲೌಕಿಕ ವ್ಯವಹಾರಗಳಲ್ಲಿ ಸಂತೃಪ್ತಿಯನ್ನು ಅನುಭವಿಸಲಿದ್ದೀರಿ. ಸಾಮಾಜಿಕ ಕಾರ್ಯಗಳಲ್ಲಿ ಪಾಲ್ಗೊಂಡು, ಅಗತ್ಯ ಇರುವವರಿಗೆ ನೆರವು ನೀಡಲಿದ್ದೀರಿ. ಕೌಟುಂಬಿಕವಾಗಿ ಯಶಸ್ಸು ಪಡೆಯುತ್ತೀರಿ. ಶುಭದಿನ 26. ದೇವಿ ಪಾರಾಯಣ ಮಾಡಿರಿ.